ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
04 JUN
ಶಂಕರಘಟ್ಟ-577 451.
ನಂ:......786......

ಕರ್ನಾಟಕ ಸರ್ಕಾರ
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಸಂಖ್ಯೆ: ಯುಸೇಇ/ರಾಸೇಯೋ/23/2020-21/17

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02.06.2020

ಇವರಿಗೆ,
ಕುಲಸಚಿವರು/ನಿರ್ದೇಶಕರು,
ಎಲ್ಲಾ ವಿಶ್ವವಿದ್ಯಾನಿಲಯ ಮತ್ತು ನಿರ್ದೇಶನಾಲಯಗಳು.

ಮಾನ್ಯರೇ,

ವಿಷಯ: ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಷ್ಟ್ರೀಯ ಸೇವಾ ಯೋಜನಾ ಕೋಶದಲ್ಲಿ "ರಾಜ್ಯ ಎನ್.ಎಸ್.ಎಸ್. ಅಧಿಕಾರಿ ಹುದ್ದೆಯನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅನುಮೋದನೆ ಕಡತ ಸಂಖ್ಯೆ:YSD-EYW/108/2019, ದಿನಾಂಕ:20.05.2020

***

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಜ್ಯ ಎನ್.ಎಸ್.ಎಸ್. ಕೋಶದಲ್ಲಿ ರಾಜ್ಯ ಎನ್.ಎಸ್.ಎಸ್. ಅಧಿಕಾರಿಯ ಹುದ್ದೆಯನ್ನು ನಿಯೋಜನೆಯ ಮೇರೆಗೆ ತುಂಬಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹುದ್ದೆಗೆ ಸಂಬಂಧಿಸಿದ ವಿವರಗಳು ಹಾಗೂ ಅರ್ಹತೆಗಳ ಕುರಿತಾದ ಪ್ರಕಟಣೆ ಹಾಗೂ ಅರ್ಜಿ ನಮೂನೆಯನ್ನು ಈ ಪತ್ರಕ್ಕೆ ಲಗತ್ತಿಸಲಾಗಿದೆ. ಇದನ್ನು ತಮ್ಮ ವಿಶ್ವವಿದ್ಯಾನಿಲಯ/ನಿರ್ದೇಶನಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಬೇಕೆಂದು ತಮ್ಮನ್ನು ಕೋರುತ್ತಿದ್ದೇನೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ.

(ಡಾ.ಗಣನಾಥ ಶೆಟ್ಟಿ)
ರಾಜ್ಯ ಎನ್.ಎಸ್.ಎಸ್. ಅಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

Registrar's
Personal Section
To No.......100
Date........4/6/2020

UCCF

ಪ್ರತಿಯನ್ನು:

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಸರ್ಕಾರ.
2. ಪ್ರಾದೇಶಿಕ ನಿರ್ದೇಶಕರು, ಎನ್.ಎಸ್.ಎಸ್. ಪ್ರಾದೇಶಿಕ ಕಛೇರಿ, ಬೆಂಗಳೂರು.
3. ಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನೆ, ಎಲ್ಲಾ ವಿಶ್ವವಿದ್ಯಾನಿಲಯ/ನಿರ್ದೇಶನಾಲಯಗಳು.

## ರಾಜ್ಯ ಎನ್.ಎಸ್.ಎಸ್. ಅಧಿಕಾರಿ ಹುದ್ದೆಗೆ ಅರ್ಜಿ ಆಹ್ವಾನ

ರಾಜ್ಯ ಸರ್ಕಾರದ ಸಚಿವಾಲಯದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ರಾಷ್ಟ್ರೀಯ ಸೇವಾ ಯೋಜನಾ ಕೋಶದ "ರಾಜ್ಯ ಎನ್.ಎಸ್.ಎಸ್. ಅಧಿಕಾರಿ" ಹುದ್ದೆಯನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**ಅರ್ಹತೆಗಳು:**

1. ಅಭ್ಯರ್ಥಿಯು ವಿಶ್ವವಿದ್ಯಾನಿಲಯದ ಎನ್.ಎಸ್.ಎಸ್ ಸಂಯೋಜನಾಧಿಕಾರಿ ಅಥವಾ ಕಾಲೇಜಿನ ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿಯಾಗಿ ಕನಿಷ್ಠ ನಾಲ್ಕು ವರ್ಷ ಸೇವೆ ಸಲ್ಲಿಸಿರಬೇಕು.
2. ಅಭ್ಯರ್ಥಿಯು ಕೇಂದ್ರ ಸರ್ಕಾರದ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯು ಎನ್.ಎಸ್.ಎಸ್. ಸಂಯೋಜನಾಧಿಕಾರಿಗೆ ನಿಗಧಿಪಡಿಸಿದ ವಿದ್ಯಾರ್ಹತೆಯನ್ನು ಹೊಂದಿರಬೇಕು.
3. ವಿಶ್ವವಿದ್ಯಾನಿಲಯ ಅಥವಾ ಕಾಲೇಜಿನಲ್ಲಿ ಸಹಪ್ರಾಧ್ಯಾಪಕ ಅಥವಾ ಹಿರಿಯ ಅಧ್ಯಾಪಕರಾಗಿರಬೇಕು.
4. ಎನ್.ಎಸ್.ಎಸ್. ಹಿನ್ನೆಲೆಯುಳ್ಳ ಸಹ ಪ್ರಾಧ್ಯಾಪಕರ ಅರ್ಹತೆ ಹೊಂದಿದ ಪ್ರಾಂಶುಪಾಲರು ಅರ್ಜಿ ಸಲ್ಲಿಸಬಹುದು.
5. ಅಭ್ಯರ್ಥಿಯು ಟಿಓಸಿ/ಟಿಓಆರ್ ಸಿ/ಇಟಿಐ ಮೂಲಕ ಎನ್.ಎಸ್.ಎಸ್. ತರಬೇತಿ ಪಡೆದಿರಬೇಕು.
6. ಅಭ್ಯರ್ಥಿಯು ಕಡ್ಡಾಯವಾಗಿ ಕಾರ್ಯನಿರ್ವಹಿಸುತ್ತಿರುವ ಇಲಾಖೆ ಅಥವಾ ವಿಶ್ವವಿದ್ಯಾನಿಲಯದ / ನಿರ್ದೇಶನಾಲಯದ ಮೂಲಕ ಅರ್ಜಿ ಸಲ್ಲಿಸಬೇಕು.

**ಅವಧಿ:**

ಅರ್ಹ ಅಭ್ಯರ್ಥಿಯನ್ನು ಮೊದಲಿಗೆ ಎರಡು ವರ್ಷಗಳ ಕಾಲಕ್ಕೆ ನಿಯೋಜನೆ/ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುವುದು. ಅವರ ತೃಪ್ತಿಕರ ಸೇವೆಯನ್ನು ಪರಿಗಣಿಸಿ ಮುಂದಿನ ಎರಡು ವರ್ಷ ಮುಂದುವರಿಸಲು ಅವಕಾಶವಿದೆ.

**ಆಯ್ಕೆ:**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯು ಸಂದರ್ಶನದ ಮೂಲಕ ಅರ್ಹ ಅಭ್ಯರ್ಥಿಯನ್ನು ಶಿಫಾರಸ್ಸು ಮಾಡುತ್ತದೆ.

ರಾಜ್ಯ ಎನ್.ಎಸ್.ಎಸ್. ಅಧಿಕಾರಿ ಹುದ್ದೆಯು ಹಿಂದೆ ರಾಜ್ಯ ಸಂಪರ್ಕಾಧಿಕಾರಿ ಹುದ್ದೆಯಾಗಿತ್ತು. ಅಧಿಕಾರಿಯ ಕಾರ್ಯ ಅರ್ಹತೆ, ಆಯ್ಕೆ ಮಾನದಂಡ, ಇತ್ಯಾದಿಗಳಿಗೆ ಕೇಂದ್ರ ಸರ್ಕಾರದ ರಾಷ್ಟ್ರೀಯ ಸೇವಾ ಯೋಜನಾ ಪರಿಷ್ಕೃತ ಕೈಪಿಡಿ-2006 ಇದನ್ನು ಗಮನಿಸಬಹುದು. ಅರ್ಜಿ ನಮೂನೆ ಮತ್ತು ಮಾಹಿತಿಗಾಗಿ ಎನ್.ಎಸ್.ಎಸ್. ರಾಜ್ಯ ಕೋಶ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಎರಡನೇ ಗೇಟ್, ಎರಡನೇ ಮಹಡಿ, ಕೊಠಡಿ ಸಂಖ್ಯೆ:238, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ರಸ್ತೆ, ಬೆಂಗಳೂರು-560001 ಅಥವ ಸಂಬಂಧಿಸಿದ ವಿಶ್ವವಿದ್ಯಾನಿಲಯಗಳ ಕುಲಸಚಿವರನ್ನು ಸಂಪರ್ಕಿಸಬಹುದು.

**ಅರ್ಹ ಅಭ್ಯರ್ಥಿಗಳು, ಅಪರ ಮುಖ್ಯ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಎರಡನೇ ಗೇಟ್, ಎರಡನೇ ಮಹಡಿ, ಕೊಠಡಿ ಸಂಖ್ಯೆ:247, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ರಸ್ತೆ, ಬೆಂಗಳೂರು-560001 ಇವರಿಗೆ ದ್ವಿಪ್ರತಿಯಲ್ಲಿ ದಿನಾಂಕ:01.07.2020 ಸಂಜೆ 5.00ಗಂಟೆಯೊಳಗೆ ಅರ್ಜಿಯನ್ನು ಸಲ್ಲಿಸಲು ಕೋರಲಾಗಿದೆ.**